**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ: 2015-16ನೇ ಸಾಲಿನ ಕೇಂದ್ರ ಪುರಸ್ಕೃತ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ಮುಳಬಾಗಿಲು ತಾಲ್ಲೂಕಿನ "30 ಗ್ರಾಮ ಪಂಚಾಯತಿಗಳ ಸಂಘಟನಾತ್ಮಕ ಅಭಿವೃದ್ಧಿ(GPOD)" ಚಟುವಟಿಕೆಗಳಿಗಾಗಿ 2ನೇ ಹಾಗೂ ಅಂತಿಮ ಕಂತಿನ ಅನುದಾನ ಬಿಡುಗಡೆಗೊಳಿಸುವ ಬಗ್ಗೆ

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 139 ಜಿಪಸ 2012(ಪಿ-3) ದಿನಾಂಕ:29.07.2013
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ-2), ಬೆಂಗಳೂರು, ದಿನಾಂಕ:30-12-2014
3. ಭಾರತ ಸರ್ಕಾರದ ಆದೇಶ ಪತ್ರ ಸಂಖ್ಯೆ:ಕೆ-11011/48/2015-ಸಿ.ಬಿ, ದಿನಾಂಕ:22.12.2015

**ಪ್ರಸ್ತಾವನೆ:**

ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯವು ರಾಷ್ಟ್ರಾದ್ಯಂತ ಅನುಷ್ಠಾನಗೊಳಿಸುತ್ತಿರುವ e-PANCHAYAT, ಪಂಚಾಯತ್ ಎಂಪವರ್‌ಮೆಂಟ್ ಅಂಡ್ ಅಕೌಂಟಬಿಲಿಟಿ ಇನ್ಸೆಂಟೀವ್ ಸ್ಕೀಮ್ (PEAIS) ಹಾಗೂ ಪಂಚಾಯತ್ ಮಹಿಳಾ ಏವಂ ಯುವಶಕ್ತಿ ಅಭಿಯಾನ (PMEYSA) ಯೋಜನೆಗಳಲ್ಲಿ ಅಳವಡಿಸಿಕೊಳ್ಳಲಾಗಿದ್ದ ಸಾಮರ್ಥ್ಯಾಭಿವೃದ್ಧಿ ಹಾಗೂ ತರಬೇತಿ ಕಾರ್ಯಕ್ರಮಗಳನ್ನು ಸಮ್ಮಿಳನಗೊಳಿಸಿ, ಪಂಚಾಯತ್ ರಾಜ್ ಸಂಸ್ಥೆಗಳನ್ನು ಹಾಗೂ ಅದರಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಪಂಚಾಯತ್ ರಾಜ್ ಚುನಾಯಿತ ಪ್ರತಿನಿಧಿಗಳು ಹಾಗೂ ಅಧಿಕಾರಿಗಳಿಗೆ ಸಾಮರ್ಥ್ಯಾಭಿವೃದ್ಧಿಯನ್ನು ಬಲಪಡಿಸುವ ಉದ್ದೇಶದಿಂದ 2012-13ನೇ ಸಾಲಿನಿಂದ ನೂತನ ಯೋಜನೆ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯನ್ನು ಕೇಂದ್ರ ಸರ್ಕಾರವು ಜಾರಿಗೊಳಿಸಿದೆ.

ಮೇಲೆ ಓದಲಾದ ಉಲ್ಲೇಖ(1)ರಲ್ಲಿನ ಸರ್ಕಾರದ ಆದೇಶದಲ್ಲಿ ಈ ಯೋಜನೆಯನ್ನು ರಾಜ್ಯದಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

2015-16ನೇ ಸಾಲಿಗೆ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್(ಆರ್.ಜಿ.ಪಿ.ಎಸ್.ಎ) ಯೋಜನೆಯಡಿ ಕೇಂದ್ರ ಸರ್ಕಾರವು ಉಲ್ಲೇಖ(3)ರ ಆದೇಶ ಪತ್ರದ ಮೂಲಕ ತನ್ನ ಸಂಪೂರ್ಣ ಮೊತ್ತ ರೂ.3271.00 ಲಕ್ಷಗಳನ್ನು ನೇರವಾಗಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಂಸ್ಥೆ, ಮೈಸೂರು ಇವರಿಗೆ ಆರ್.ಟಿ.ಜಿ.ಎಸ್ ಮೂಲಕ ಉಳಿತಾಯ ಖಾತೆ ಸಂಖ್ಯೆ 64133839448(IFSC code no SBMY0041010)ಗೆ ಬಿಡುಗಡೆಗೊಳಿಸಿರುತ್ತಾರೆ. ಪ್ರಸ್ತುತ ಸಂಪೂರ್ಣ ಕೇಂದ್ರದ ವಂತಿಗೆಯಲ್ಲಿ ವರ್ಗೇತರ (NON-SC ಮತ್ತು ST) ಯೋಜನೆ, ವಿಶೇಷ ಘಟಕ (SC) ಯೋಜನೆ ಮತ್ತು ವಿಶೇಷ ಗಿರಿಜನ (ST) ಯೋಜನೆಗಳಿಗಾಗಿ 2015-16ನೇ ಸಾಲಿನ ಕೇಂದ್ರ ಸರ್ಕಾರವು ಕರ್ನಾಟಕ ರಾಜ್ಯಕ್ಕೆ ನೀಡಲು ನಿರ್ಧರಿಸಿ ಅನುಕ್ರಮವಾಗಿ ರೂ.23,22,41,000/-, ರೂ.6,54,20,000/- ಮತ್ತು ರೂ.2,94,39,000/- ಒಟ್ಟಾರೆ ರೂ.32,71,00,000/- ಗಳನ್ನು ಬಿಡುಗಡೆಗೊಳಿಸಿರುತ್ತಾರೆ.

ಮೇಲೆ ಓದಲಾದ ಉಲ್ಲೇಖ(3)ರಲ್ಲಿನ ಕೇಂದ್ರ ಸರ್ಕಾರದ ಪತ್ರದಲ್ಲಿ ಕರ್ನಾಟಕದ ಕೋಲಾರ ಜಿಲ್ಲೆ ಮುಳಬಾಗಿಲು ತಾಲ್ಲೂಕಿನ "30 ಗ್ರಾಮ ಪಂಚಾಯತಿಗಳ ಸಂಘಟನಾತ್ಮಕ ಅಭಿವೃದ್ಧಿ(GOPD)" ಚಟುವಟಿಕೆಗಳನ್ನು ನಿರ್ವಹಿಸಲು ಅವಕಾಶ ಕಲ್ಪಿಸಿದ್ದು, ಈ ಉದ್ದೇಶಕ್ಕಾಗಿ ಒಟ್ಟಾರೆ ರೂ.200.74ಲಕ್ಷ ಅನುದಾನವನ್ನು ನಿಗಧಿಗೊಳಿಸಿರುತ್ತದೆ. ಉಲ್ಲೇಖ(2)ರ ಆದೇಶದ ಮೂಲಕ ಈಗಾಗಲೇ ರೂ.100.00ಲಕ್ಷಗಳನ್ನು ಬಿಡುಗಡೆಗೊಳಿಸಲಾಗಿದೆ. ಉಲ್ಲೇಖ(3)ರ ಆದೇಶದಲ್ಲಿ ತಿಳಿಸಿದಂತೆ ರೂ.111.00ಲಕ್ಷಗಳನ್ನು ಮುಖ್ಯ

... ಬಿಡುಗಡೆಗೊಳಿಸಲಾಗುವ ಅನುದಾನದ ಮೊತ್ತವನ್ನು ಕೆಳಕಂಡ ಉದ್ದೇಶಗಳಿಗಾಗಿ ಬಳಸಿಕೊಳ್ಳಬಹುದಾಗಿದೆ.

1. ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು ಇವರಿಗೆ ತರಬೇತಿಯ ಉದ್ದೇಶಕ್ಕಾಗಿ– ರೂ.44.80 ಲಕ್ಷಗಳು
2. ಯೋಜನಾ ಉಸ್ತುವಾರಿ ಸಮಿತಿಗೆ–ರೂ.55.56ಲಕ್ಷಗಳು
3. ಮೆ:ಆವಂತಿಕ ಫೌಂಡೇಶನ್ ಸಂಸ್ಥೆಯ ಸಲಹೆಗಾರರಿಗೆ ಪ್ರಯಾಣ ವೆಚ್ಚ–24.00ಲಕ್ಷಗಳು
4. 30 ಗ್ರಾಮ ಪಂಚಾಯತಿಗಳಿಗೆ–ರೂ.76.38ಲಕ್ಷಗಳು

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 182 ಜಿಪಸ 2014(ಪಿ–2), ಬೆಂಗಳೂರು, ದಿನಾಂಕ:07–06–2016.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿರುವ ಎಲ್ಲಾ ಅಂಶಗಳ ಹಿನ್ನಲೆಯಲ್ಲಿ, ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯಡಿಯಲ್ಲಿ ಕೋಲಾರ ಜಿಲ್ಲೆ ಮುಳಬಾಗಿಲು ತಾಲ್ಲೂಕಿನ "30 ಗ್ರಾಮ ಪಂಚಾಯತಿಗಳ ಸಂಘಟನಾತ್ಮಕ ಅಭಿವೃದ್ಧಿ(GOPD)" ಚಟುವಟಿಕೆಗಳನ್ನು ನಿರ್ವಹಿಸುವ ಜವಾಬ್ದಾರಿಯನ್ನು ಮೆ:ಆವಂತಿಕ ಫೌಂಡೇಶನ್ ಇಂದಿರಾನಗರ, ಬೆಂಗಳೂರುರವರಿಗೆ ವಹಿಸಲು ಹಾಗೂ ಕೋಲಾರ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಅಧ್ಯಕ್ಷತೆಯಲ್ಲಿ "ಯೋಜನಾ ಉಸ್ತುವಾರಿ ಸಮಿತಿ" ಯನ್ನು ರಚಿಸಲು, ಈ ಸಮಿತಿಗೆ ಯೋಜನೆಯ ಅನುಷ್ಠಾನದ ಆಡಳಿತ ಮತ್ತು ಆರ್ಥಿಕ ಜವಾಬ್ದಾರಿಗಳನ್ನು ವಹಿಸಲು ಸರ್ಕಾರ ಆದೇಶಿಸಿದೆ.

ಮೇಲೆ ವಿವರಿಸಿರುವ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸಲು ಉದ್ದೇಶಕ್ಕಾಗಿ ಒದಗಿಸಿರುವ ಒಟ್ಟಾರೆ ರೂ.200.74ಲಕ್ಷ ಅನುದಾನದಲ್ಲಿ ಮೊದಲನೆಯ ಕಂತಿನ ಬಾಬ್ತು ರೂ.100.00 (ಒಂದು ನೂರು ಲಕ್ಷರೂಪಾಯಿಗಳು ಮಾತ್ರ) ಲಕ್ಷಗಳನ್ನು ಕೋಲಾರ ಜಿಲ್ಲಾ ಪಂಚಾಯತಿ ಇವರಿಗೆ ಬಿಡುಗಡೆಗೊಳಿಸಲಾಗಿತ್ತು, ಮುಂದುವರೆದು 2ನೇ ಮತ್ತು ಅಂತಿಮ ಕಂತಿನ ಅನುದಾನವಾಗಿ ರೂ.111.00ಲಕ್ಷಗಳನ್ನು ಈ ಉದ್ದೇಶಕ್ಕಾಗಿ ಸ್ಥಾಪಿತವಾಗಿರುವ "ಯೋಜನಾ ಉಸ್ತುವಾರಿ ಸಮಿತಿ"ಗೆ ಬಿಡುಗಡೆಗೊಳಿಸಲು ಆದೇಶಿಸಿದೆ.

ಈ ಮೊತ್ತವನ್ನು ಬೆಂಗಳೂರಿನ ಇಂದಿರಾ ನಗರದಲ್ಲಿರುವ ದೇನಾ ಬ್ಯಾಂಕ್‌ನಲ್ಲಿ ತೆರೆಯಲಾಗಿರುವ ಎಸ್.ಬಿ. ಖಾತೆಯ ಸಂಖ್ಯೆ 052110026480ರಿಂದ ಕೋಲಾರ ಜಿಲ್ಲಾ ಪಂಚಾಯತಿಯ ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ ಯೋಜನೆ–ಗ್ರಾಮ ಪಂಚಾಯತಿಗಳ ಸಂಘಟನಾತ್ಮಕ ಅಭಿವೃದ್ಧಿ(GPOD) ಎಂಬ ಹೆಸರಿನ ಕೋಲಾರದ DCC ಬ್ಯಾಂಕಿನ ಮುಖ್ಯ ಶಾಖೆಯಲ್ಲಿ ತೆರೆಯಲಾಗಿರುವ ಉಳಿತಾಯ ಖಾತೆ ಸಂಖ್ಯೆ 125000079260(IFSC Code KSCB0003001)ಗೆ ಆನ್‌ಲೈನ್ ಮೂಲಕ ವರ್ಗಾಯಿಸಲು ಆದೇಶಿಸಿದೆ.

**ಅನುದಾನದ ವಿನಿಯೋಗವು ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.**

1. ಅನುದಾನವನ್ನು ಯಾವ ಉದ್ದೇಶಗಳಿಗಾಗಿ ಬಿಡುಗಡೆಗೊಳಿಸಲಾಗಿದೆಯೋ, ಆದೇ ಉದ್ದೇಶಗಳಿಗೆ ಮಾತ್ರ ವಿನಿಯೋಗಿಸುವುದು.
2. ಯೋಜನೆಗೆ ಪ್ರತ್ಯೇಕವಾಗಿ ನಗದು ಪುಸ್ತಕ ಮತ್ತು ಲೆಕ್ಕಪತ್ರಗಳನ್ನು ನಿರ್ವಹಿಸುವುದು.
3. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳ ಪಾರದರ್ಶಕತೆ ಅಧಿನಿಯಮ–1999ರ ಅನುಸಾರ ಖರೀದಿಸುವುದು.
4. ಈ ಆದೇಶದ ಮೂಲಕ ಬಿಡುಗಡೆಗೊಳಿಸಿದ ಅನುದಾನವನ್ನು ನಿಗಧಿತ ನಮೂನೆ(ಜಿ.ಎಫ್.ಆರ್ 19–ಎ ನಮೂನೆ)ಯಲ್ಲಿ ಹಣ ಬಳಕೆ ಪ್ರಮಾಣ ಪತ್ರವನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ಮೂಲಕ

ನಿರ್ದೇಶಕರು (ಪಂ.ರಾಜ್-2) ಗ್ರಾ.ಅ.ಪಂ.ರಾಜ್/ ಇಲಾಖೆ ಇವರಿಗೆ ಸಲ್ಲಿಸುವುದು. ಇದರ ಜೊತೆಗೆ Non-Duplication, Non-Diversion ಮತ್ತು Non-Embezzlement ಪ್ರಮಾಣ ಪತ್ರಗಳನ್ನು ಸಲ್ಲಿಸುವುದು.

5. ರಾಜೀವ್ ಗಾಂಧಿ ಪಂಚಾಯತಿ ಸಶಕ್ತೀಕರಣ ಅಭಿಯಾನ್ (ಆರ್.ಜಿ.ಪಿ.ಎಸ್.ಎ) ಯೋಜನೆಯ ಕೇಂದ್ರ ಸರ್ಕಾರ ಪ್ರಾಯೋಜಿತ ತೃತೀಯ ಮಧ್ಯವರ್ತಿ(Third Party Evaluation)ಗಳಿಂದ ಎಲ್ಲಾ ಕಾಮಗಾರಿಗಳನ್ನು ಪರಿವೀಕ್ಷಿಸಲು ಹಾಗೂ ಮೌಲ್ಯಮಾಪನ ಮಾಡಲು ಈ ಆರ್ಥಿಕ ವರ್ಷದ ಅಂತ್ಯದಲ್ಲಿ ಆಗಮಿಸುವರು.

ಆಂತರಿ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಇಲಾಖೆ ಇವರ ಟಿಪ್ಪಣಿ ಸಂಖ್ಯೆ:ಗ್ರಾಅಪ 310 ಪಿಬಿಎಸ್ 2016 ದಿನಾಂಕ:04.06.2016ರ ಸಹಮತಿಯನ್ವಯ ಹಾಗೂ ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/3/ಟಿಎಫ್‌ಪಿ/2016, ದಿನಾಂಕ:02-04-2016ರಲ್ಲಿ ಆಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿದ ಅಧಿಕಾರದನ್ವಯ ಈ ಆದೇಶವನ್ನು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎಂ.ಬಿ.ಧೋತ್ರೆ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಪ್ರಧಾನ ಮಹಾಲೇಖಪಾಲರು (ಜಿ ಅಂಡ್ ಎಸ್ ಎಸ್ ಎ), ಕರ್ನಾಟಕ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (ಇ ಅಂಡ್ ಆರ್ ಎಸ್ ಎ), ಕರ್ನಾಟಕ, ಬೆಂಗಳೂರು.
3. ಪ್ರಧಾನ ಮಹಾಲೇಖಪಾಲರು (ಎ ಅಂಡ್ ಇ), ಕರ್ನಾಟಕ, ಬೆಂಗಳೂರು.
4. ಮುಖ್ಯ ಕಾರ್ಯನಿರ್ವಾಹಕಾಧಿಕಾರಿ, ಜಿಲ್ಲಾ ಪಂಚಾಯತಿ, ಕೋಲಾರ
5. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಂಸ್ಥೆ, ಲಲಿತ ಮಹಲ್ ರಸ್ತೆ, ಮೈಸೂರು
6. ಮೆ:ಆವಂತಿಕ ಫೌಂಡೇಶನ್, ನಂ. 810, 2ನೇ ಮಹಡಿ, 10ನೇ ಮುಖ್ಯ ರಸ್ತೆ, ಇಂದಿರಾನಗರ, ಬೆಂಗಳೂರು.
7. ಪ್ರಧಾನ ವ್ಯವಸ್ಥಾಪಕರು, ದೇನಾ ಬ್ಯಾಂಕ್, ಇಂದಿರಾ ನಗರ ಶಾಖೆ, ಬೆಂಗಳೂರು.
8. ಇಲಾಖಾ ವೆಬ್‌ಸೈಟ್ / ಕರ್ನಾಟಕ ವಿಕಾಸ ಮಾಸ ಪತ್ರಿಕೆ.
9. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತಿ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿಗಳ ಕಟ್ಟಡ, ಬೆಂಗಳೂರು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
4. ನಿರ್ದೇಶಕರು (ಪಂ.ರಾಜ್-2), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಸಹಾಯಕ, ಬಹುಮಹಡಿಗಳ ಕಟ್ಟಡ, ಬೆಂಗಳೂರು.